ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ: ಪಪೂಶಿಇ/ಶೈಶಾ-2/ಕ.ಹಾ.ವಿ/2020-21 ದಿನಾಂಕ: 09.02.2021

**ಸುತ್ತೋಲೆ**

ವಿಷಯ: 2020-21ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಿಗೆ ಕಡ್ಡಾಯ ಕನಿಷ್ಠ ಹಾಜರಾತಿಯಿಂದ ವಿನಾಯಿತಿ ನೀಡುವ ಬಗ್ಗೆ.

ಉಲ್ಲೇಖ: ಏಕ ಕಡತದಲ್ಲಿ ಸರ್ಕಾರದ ಆದೇಶ ದಿನಾಂಕ 08.02.2021

* * * *

ಕೋವಿಡ್-19ರ ಹಿನ್ನೆಲೆಯಲ್ಲಿ ಭೌತಿಕ ತರಗತಿಗಳು ದಿನಾಂಕ 01.01.2021 ರಿಂದ ದ್ವಿತೀಯ ಪಿಯುಸಿಗೆ ಹಾಗೂ 01.02.2021 ರಿಂದ ಪ್ರಥಮ ಪಿಯುಸಿಗೆ ಆರಂಭವಾಗಿವೆ. ರಾಜ್ಯ ಸರ್ಕಾರ ಹಾಗೂ ಇಲಾಖೆ ಸಿದ್ದಪಡಿಸಿದ SOP ಗಳನ್ನು ಕಟ್ಟುನಿಟ್ಟಾಗಿ ಅಳವಡಿಸಿಕೊಂಡು ತರಗತಿಗಳನ್ನು ಆರಂಭಿಸಲಾಗಿದೆ.

ಕರ್ನಾಟಕ ಪದವಿ ಪೂರ್ವ ಶಿಕ್ಷಣ (ಶೈಕ್ಷಣಿಕ, ನೋಂದಣಿ, ಆಡಳಿತ ಮತ್ತು ಅನುದಾನಿತ ಇತ್ಯಾದಿ) ನಿಯಮಗಳು 2006 ರ ಉಪ ನಿಯಮ 12(1) ರನ್ವಯ ಕನಿಷ್ಠ ಶೇಕಡಾ 75ರಷ್ಟು ಹಾಜರಾತಿಯ ಅರ್ಹತೆಯನ್ನು ವಾರ್ಷಿಕ ಪರೀಕ್ಷೆಗೆ ಹಾಜರಾಗಲು ನಿಗಧಿಪಡಿಸಲಾಗಿದೆ.

ದಿನಾಂಕ 01.01.2021 ರಿಂದ ದ್ವಿತೀಯ ಪಿಯುಸಿಗೆ ಹಾಗೂ 01.02.2021 ರಿಂದ ಪ್ರಥಮ ಪಿಯುಸಿಗೆ ಭೌತಿಕ ತರಗತಿಗಳು ಆರಂಭವಾಗಿದ್ದರೂ ಕೋವಿಡ್-19ರ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಕಾಲೇಜುಗಳಿಗೆ ಹಾಜರಾಗುವುದನ್ನು ಕಡ್ಡಾಯಗೊಳಿಸಿರುವುದಿಲ್ಲ. ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸಿದ ನಂತರ ಕನಿಷ್ಠ ಹಾಜರಾತಿಗೆ ವಿನಾಯಿತಿ ನೀಡಿ ಹಾಜರಾತಿ ಇಲ್ಲದಿದ್ದರೂ ಸಹ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗಿದೆ.

**ಈ ಅನುಮತಿಯು 2020-21ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯವಾಗಲಿದೆ.**

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರ ಮೂಲಕ ಸಂಬಂಧಿಸಿದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಸೂಕ್ತ ಕ್ರಮಕ್ಕಾಗಿ.
2. ಹೆಚ್ಚುವರಿ / ಕಛೇರಿ ಪ್ರತಿ.